[redacted]



## ವಾಣಿಜ್ಯ ಮಳಿಗೆಗಳ ಜಾಹೀರ ಲಿಲಾವು

ಗದಗ , ಮಾ-: ರೋಣ ಪುರಸ ಭೆ ವ್ಯಾಪ್ತಿಯಲ್ಲಿ ಬರುವ ಬಸ್ ಸ್ಟ್ಯಾಂಡ್ ಹತ್ತಿರ ನಿರ್ಮಿಸಿದ 2014-15 ನೇ ಸಾಲಿನ ಎಸ್.ಎ ಫ್.ಸಿ. ಅನುದಾನದಲ್ಲಿ ಒಟ್ಟು 3 ವಾಣಿಜ್ಯ ಮಳಿಗೆಗಳು ಉಳಿದಿವೆ. ಮಳಿಗೆ ನಂ.3 ಮತ್ತು 11 ಸಾಮಾ ನ್ಯ ಹಾಗೂ ಮಳಿಗೆ ನಂ. 18 ಪರಿಶಿಷ್ಟ ಪಂಗಡಕ್ಕೆ ಮೀಸಲಿರಿ ಸಿದ್ದು ಮಾ.12 ರಂದು ಮಧ್ಯಾಹ್ನ 12 ಗಂಟೆಗೆ ರೋಣ ಪುರಸಭೆ ಕಾರ್ಯಾಲಯದಲ್ಲಿ ಬಹಿರಂಗ ಹರಾಜು ಮಾಡಲಾಗುವುದು. ಭಾಗವಹಿಸುವ ಆಸಕ್ತರು ರೂ, 35000/- ಗಳ ಡಿಡಿಯನ್ನು ಮುಖ್ಯಾಧಿಕಾರಿ ಪುರಸಭೆ ರೋಣ ಇವರ ಹೆಸರಿನಲ್ಲಿ ಪಡೆದು ಕಚೇರಿಗೆ ಸಲ್ಲಿಸಿ ಲಿಲಾವಿನಲ್ಲಿ ಭಾಗವಹಿಸಬೇಕು. ಹೆಚ್ಚಿನ ವಿವರಗಳಿಗೆ ರೋಣ ಪುರಸಭೆ ಕಾರ್ಯಾಲಯ ದೂರವಾಣಿ ಸಂಖ್ಯೆ 08381-267234 ಸಂಪರ್ಕಿಸಬಹುದಾಗಿದೆ.

## ಬಳ್ಳಾರಿ: ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಹಾಯವಾಣಿ ಆರಂಭ; ಕುಡಿಯುವ ನೀರು, ಮೇವು ಸಮಸ್ಯೆ ಇದ್ದರೆ ಕರೆ ಮಾಡಿ-ಮಿಶ್ರಾ



ಬಳ್ಳಾರಿ,ಮಾ-: ಬಳ್ಳಾರಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಮತ್ತು ಮೇವಿನ ಕೊರತೆ ಉಂಟಾದಲ್ಲಿ ಹಾಗೂ ಬೆಳೆ ಹಾನಿ ಪರಿಹಾರದ ಹಣ ಖಾತೆಗೆ ಜಮಾ ಆಗದೇ ಇರುವ ಬಗ್ಗೆ ದೂರುಗಳನ್ನು ಸಲ್ಲಿಸಲು ಸಾರ್ವಜನಿಕರಿಗೆ ಅನುಕೂಲವಾಗುವಂತೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಹಾಯವಾಣಿ ಸಂಖ್ಯೆ 1077 ಅಥವಾ 08392-277100 ಆರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.2023ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬಳ್ಳಾರಿ ಜಿಲ್ಲೆಯ 5 ತಾಲ್ಲೂಕುಗಳನ್ನು (ಬಳ್ಳಾರಿ, ಸಂಡೂರು, ಸಿರುಗುಪ್ಪ, ಕುರುಗೋಡು ಮತ್ತು ಕಂಪ್ಲಿ) ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಿ ಆದೇಶಿಸಿದೆ. ಮುಂದಿನ ದಿನಗಳಲ್ಲಿ ಬರದ ತೀವ್ರತೆ ಹೆಚ್ಚಾಗುವುದರಿಂದ ಈ ಸಮಸ್ಯೆಯುನ್ನು ಎದುರಿಸಲು ಕ್ರಿಯಾ ಯೋಜನೆಯುನ್ನು ಸಿದ್ದಪಡಿಸಿಕೊಳ್ಳಲಾಗಿದ್ದು, ಕುಡಿಯುವ ನೀರು, ಮೇವಿನ ಕೊರತೆಯಾದಲ್ಲಿ ಸಹಾಯವಾಣಿ ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.



ಬಳ್ಳಾರಿ ಮಾ -ಬಳ್ಳಾರಿ ನಗರದ ವಾರ್ಡ್ ನಂ. 05 ಕಾರ್ಕಲ್ತೋಟನಲ್ಲಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ನೂತನ ಶಾಲಾ ಕಟ್ಟಡ ಅಭಿವೃದ್ಧಿ ಮಾಡುವ ಕಾಮಗಾರಿಗೆ ಶಾಸಕ ನಾರಾ ಭರತ್‌ರೆಡ್ಡಿ ಭೂಮಿ ಪೂಜೆ ನೆರವೇರಿಸಿದರು. ಸದರಿ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಮೇಯರ್ ಶ್ರೀಮತಿ ಬಿ.ಶ್ವೇತ ಉಪ ಮೇಯರ್ ಶ್ರೀಮತಿ ಜಾನಕಿ 5ನೇ ವಾರ್ಡ್ ನ ಪಾಲಿಕೆ ಸದಸ್ಯರಾದ ಹೆಚ್.ರಾಜಶೇಖರ್ ಹಾಗೂ ಪಾಲಿಕೆಯ ಇತರೆ ಸದಸ್ಯರು ಮತ್ತು ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

## ಕೆಎಸ್‌ಆರ್‌ಡಿಪಿಆರ್ ವಿಶ್ವವಿದ್ಯಾಲಯದ 4 ನೇ ಘಟಿಕೋತ್ಸವ ಚಿರಂಜೀವ್ ಸಿಂಗ್ ಹಾಗೂ ಸಿ. ನಾರಾಯಣಸ್ವಾಮಿ ಅವರಿಗೆ ಡಾಕ್ಟರೇಟ್ ಪದವಿ ಪ್ರದಾನ, ವಿವಿಧ ಸ್ನಾತಕೋತ್ತರ ಸಾಧಕರಿಗೆ ಚಿನ್ನದ ಪದಕ



ಗದಗ , ಮಾ-: ಕರ್ನಾಟಕದ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾ0ಯತ್ ರಾಜ್ ವಿಶ್ವವಿದ್ಯಾಲ0ಯದ 4 ನೇ ಘಟಿಕೋತ್ಸವದ ಸಮಾರಂಭದಲ್ಲಿ ಚಿರಂಜೀವ್ ಸಿಂಗ್ ಹಾಗೂ ಸಿ. ನಾರಾ ಯಣಸ್ವಾಮಿ ಅವರಿಗೆ ಗ್ರಾಮೀ ಣಾಭಿವೃದ್ಧಿ ಚೇತನ ಬಿರುದು ನೀಡಿ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಯಿತು.ಪಂಜಾಬ್ ಪ್ರಾಂತದಿಂದ ಕರ್ನಾಟಕಕ್ಕೆ ಆಗಮಿಸಿ ಕನ್ನಡ ಭಾಷೆ, ಸಂಸ್ಕೃತಿ, ಆಚಾರ ವಿಚಾರಗಳನ್ನು ಅಳವಡಿಸಿಕೊಂಡು ಅಚ್ಚ ಕನ್ನಡಿಗರಾಗಿ ಸಾರ್ಥಕ ಜೀವನ ನಡೆಸಿಕೊಂಡು ಬಂದಿರುವ ಐಎಎಸ್ ಅಧಿಕಾರಿ ಚಿರಂಜೀವ್ ಸಿಂಗ್ ಅವರಿಗೆ ಡಾಕ್ಟರ್ ಆಫ್ ಲಿಟರೇಚರ್ (ಡಿ.ಲಿಟ್) ಗೌರವ ಪದವಿ ಹಾಗೂ ಸಹಕಾರ ಗ್ರಾಮೀಣ ಅಭಿವೃದ್ಧಿ ಕ್ಷೇತ್ರಗಳಲ್ಲಿ ಹಾಗೂ ಪಂಚಾಯತ್ ರಾಜ್ ವ್ಯವಸ್ಥೆಯ ಮೂಲಕ ಅಧಿಕಾರದ ವಿಕೇಂದ್ರೀಕರಣಗೊಳಿಸುವ ಹಾಗೂ ನೀತಿ ನಿಯಮಗಳನ್ನು ರೂಪಿಸುವ ಪ್ರಕ್ರಿಯೆಯಲ್ಲಿ ಪ್ರಮುಖ ಪಾತ್ರ ವಹಿಸಿದ ಹಾಗೂ ಪ್ರಸ್ತುತ ಕರ್ನಾಟಕ ರಾಜ್ಯದ 5ನೇ ಹಣಕಾಸು ಅಯೋಗದ ಅಧ್ಯಕ್ಷರಾಗಿ ಹಾಗೂ ಕರ್ನಾಟಕ ಪಂಚಾಯತ್ ರಾಜ್ ಪರಿಷತ್ತಿನ ಕಾರ್ಯಕಾರಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿರುವ ಸಿ. ನಾರಾಯಣಸ್ವಾಮಿ ಅವರಿಗೆ ಡಾಕ್ಟರ್ ಆಫ್ ಲಾಸ್ (ಎಲ್.ಎಲ್.ಡಿ) ಗೌರವ ಪದವಿ ನೀಡಲಾಯಿತು.

ಇದೇ ಸಮಾರಂಭದಲ್ಲಿ ಸ್ನಾತಕೋತ್ತರ 11 ಸಾಧಕರಿಗೆ ಚಿನ್ನದ ಪದಕಗಳನ್ನು ಪ್ರದಾನ ಮಾಡಲಾಯಿತು. ವಿವರ ಇಂತಿದೆ .ಎಂ.ಬಿ.ಎ,ವಿಭಾಗದಲ್ಲಿ ಅತ್ಯಧಿಕ ಅಂಕಗಳನ್ನು ಪಡೆದ ಓಜಸ್ವಿ ಮಲ್ಲಾಡದ; ಎಂ.ಎ(ಆರ್.ಡಿ.ಪಿ.ಆರ್.) ವಿಭಾಗದ ಲಿಂಗರಾಜು ಎಚ್.ಎಮ್; ಎಂ.ಎ(ಪಿ.ಎ.)ವಿಭಾಗದ ಭೀಮಪ್ಪ ಚಲವಾದಿ; ಎಂ.ಎಸ್ಸಿ. (ಜಿ.ಐ.ಎಸ್)ವಿಭಾಗದ 0ಯಲ್ಲಾಲಿಂಗ ಹೊಸಮನಿ; ,ಎಂ.ಎಸ್ಸಿ (ಎಫ್‌ಎಸ್‌ಟಿ) ವಿಭಾಗದ ನಿಶಾ ಎಂ; ಎಂಪಿಎಚ್ ವಿಭಾಗದ ಶರೋನ್ ಅನ್ನಾ ಥಾಮಸ್; ಎಂಎಸ್‌ಡಬ್ಲ್ಯೂ ವಿಭಾಗದ ಅಕ್ಷತಾ ಸಾನಿಕೊಪ್ಪ ಹಾಗೂ ಕೀರ್ತಿ ಗಾಮನಗಟ್ಟಿ ; ಎಂಎ (ಡಿಇ)ವಿಭಾಗದ ಜಗದೀಶ ಎನ್ ಬಳಿಗಾರ; ಎಂಕಾಂ ವಿಭಾಗದ ಲತಾ ಕಡಾರ; ಎಂ ಎಸ್ ಸಿ(ಸಿ.ಎಸ್.)ವಿಭಾಗದ ಪವಿತ್ರಾ ಶೇಟ ಈ ಸಾಧಕರುಗಳಿಗೆ ಚಿನ್ನದ ಪದಕ ಗಳನ್ನು ನೀಡಿ ಗೌರವಿಸಲಾಯಿತು. ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯದ ಸಹ ಕುಲಾಧಿಪತಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಪ್ರಿಯಾಂಕ್ ಖರ್ಗೆ, ವಿಶ್ವ ವಿದ್ಯಾಲಯದ ಕುಲಪತಿ ಪ್ರೊ. ವಿಷ್ಣುಕಾಂತ್ ಚಟಪಲ್ಲಿ ಕುಲಸಚಿವ ಡಾ.ಸುರೇಶ ನಾಡಗೌಡರ ಅವರು ಸಾಧಕರಿಗೆ ಅಭಿನಂದನೆ ಸಲ್ಲಿಸಿದರು.

## ಆಲಮೇಲ ತಾಲೂಕಾ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ರಚನೆಗೆ ಅಧಿಸೂಚನೆ : ಆಕ್ಷೇಪಣೆ ಆಹ್ವಾನ


ವಿಜಯಪುರ, ಮಾ.-: ಸಿಂದಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮಾರುಕಟ್ಟೆ ಕ್ಷೇತ್ರವನ್ನು ವಿಭಜಿಸಿ, ಆಲಮೇಲ ತಾಲೂಕಿಗೆ ಪ್ರತ್ಯೇಕ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ರಚಿಸಲು ಸಹಕಾರ ಇಲಾಖೆ ಅಧೀನ ಕಾರ್ಯದರ್ಶಿಗಳು ಅಧಿಸೂಚನೆ ಹೊರಡಿಸಿದ್ದು, ಈ ಕುರಿತು ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ. ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966 ಕಲಂ 145ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ರೈತರ ಹಿತದೃಷ್ಟಿಯಿಂದ ವಿಜಯಪುರ ಜಿಲ್ಲೆಯ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮಾರುಕಟ್ಟೆ ಕೇತ್ರವನ್ನು ವಿಭಜಿಸಿ, ಅಲಮೇಲ ತಾಲ್ಲೂಕಿಗೆ ಹೊಸದಾಗಿ ಪ್ರತ್ಯೇಕ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ರಚಿಸಲು ಹಾಗೂ 95 ಅಧಿಸೂಚಿತ ಕೃಷಿ ಉತ್ಪನ್ನಗಳ ಮಾರಾಟ ನಿಯಂತ್ರಣಕ್ಕೆ ಒಳಪಡಿಸಲು ಉದ್ದೇಶಿಸಲಾಗಿದೆ. ಉದ್ದೇಶಿತ ಪ್ರಸ್ತಾವನೆಗೆ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ದಿ) ಅಧಿನಿಯಮ, 1966ರ ಕಲಂ 03 ರನ್ವಯ ಆಕ್ಷೇಪಣೆ/ಸಲಹೆಗಳನ್ನು ಆಹ್ವಾನಿಸಿದ್ದು, ಯಾವುದೇ ಆಕ್ಷೇಪಣೆಗಳು/ ಸಲಹೆಗಳು ಇದ್ದಲ್ಲಿ, ಈ ಅಧಿಸೂಚನೆಯು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಅಥವಾ ಈ ಪ್ರಕಟಣೆಯ 30 ದಿವಸದೊಳಗಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕೊಠಡಿ ಸಂಖ್ಯೆ: 610.6ನೇ ಮಹಡಿ, 3ನೇ ಗೇಟ್. ಸಹಾಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು 560001 ಇವರಿಗೆ ಸಲ್ಲಿಸುವಂತೆ ಸಿಂದಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾ.10 ರಂದು ರಾಜ್ಯ ಪೊಲೀಸ್ ಸುವರ್ಣ ಮಹೋತ್ಸವ ಆಚರಣೆ



ಬಳ್ಳಾರಿ,ಮಾ-: ರಾಜ್ಯ ಪೊಲೀಸ್ ಸುವರ್ಣ ಮಹೋತ್ಸವ ಆಚರಣೆ ಅಂಗವಾಗಿ ನಮ್ಮೆಲ್ಲರ ಸದೃಢತೆ ಹಾಗೂ ಡ್ರಗ್ಸ್ ಮುಕ್ತ ಕರ್ನಾಟಕ ಮಾಡುವ ನಿಟ್ಟಿನಲ್ಲಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಮಾ.10 ರಂದು ಬೆಳಿಗ್ಗೆ 6.30 ಗಂಟೆಗೆ ನಗರದ ಡಾ.ರಾಜಕುಮಾರ್ ರಸ್ತೆಯ ಮುನಿಸಿಪಲ್ ಹೈಸ್ಕೂಲ್ ಮೈದಾನದ ಆವರಣದಿಂದ ಕರ್ನಾಟಕ ಪೊಲೀಸ್ 10ಕೆ ರನ್ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ಪೊಲೀಸ್ ಅಧೀಕ್ಷಕ ರಂಜೀತ್ ಕುಮಾರ್ ಬಂಡಾರು ಅವರು ತಿಳಿಸಿದ್ದಾರೆ.

## ಬಾಬು ಜಗಜೀವನ್ ರಾಮ್ ಚರ್ಮ ಕೈಗಾರಿಕಾ ಅಧ್ಯಕ್ಷರಾಗಿ ಮುಂಡ್ರಿಗಿ ನಾಗರಾಜ್ ಅಧಿಕಾರ ಸ್ವೀಕಾರ



ಬಳ್ಳಾರಿ ಮಾ-:. ಕರ್ನಾಟಕ ಸರ್ಕಾರದ ಡಾ. ಬಾಬು ಜಗಜೀವನ್ ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ನೂತನ ಅಧ್ಯಕ್ಷರಾಗಿ ಮುಂಡರಗಿ ನಾಗರಾಜ್ ರವರು ಇಂದು ಅಧಿಕಾರ ವಹಿಸಿಕೊಂಡರು. ಬೆಂಗಳೂರಿನ ವಸಂತನಗರದಲ್ಲಿನ ಲಿಡ್ಕರ್ ಭವನದಲ್ಲಿ ಇಂದು ತಮ್ಮ ಕುಟುಂಬ ವರ್ಗದವರು, ಹಿತೈಷಿಗರು, ಬೆಂಬಲಿಗರು ಹಾಗೂ ಕಾರ್ಯಕರ್ತರೊಂದಿಗೆ ತೆರಳಿ ಅಧಿಕಾರ ಸ್ವೀಕರಿಸಿದರು. ಲಿಡ್ಕರ್‌ನ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಂ. ವಸುಂದರಾ ಹೂಗುಚ್ಚ ನೀಡಿ ಸ್ವಾಗತಿಸಿದರು.ಈ ಸಂದರ್ಭದಲ್ಲಿ ಮಾಜಿ ವಿಧಾನಪರಿಷತ್ ಸದಸ್ಯ ಕೆ.ಎಸ್.ಎಲ್ ಸ್ವಾಮಿ, ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಕವಿತಾ ರೆಡ್ಡಿ, ಕಾಂಗ್ರೆಸ್ ಮುಖಂಡರಾದ ವೆಂಕಟೇಶ್ ಪ್ರಸಾದ್, ಬೆಣಕಲ್ಲು ಬಸವರಾಜ್ ಗೌಡ, ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಬಳ್ಳಾರಿ ಜಿಲ್ಲಾ ಸಂಚಾಲಕರಾದ ಜಿ ಗೋವರ್ಧನ, ವಿಜಯನಗರ ಜಿಲ್ಲಾ ಸಂಚಾಲಕರಾದ ಎಸ್ ದುರುಗೇಶ್, ಜಿಲ್ಲಾ ಸಂಘಟನಾ ಸಂಚಾಲಕರಾದ ನಟರಾಜ, ಸಣ್ಣ ನಾಗರಾಜ, ಫೋಟೋರಾಜ, ಕ.ದ.ಸಂ.ಸ ಮುಖಂಡರಾದ ಬಾಪೂಜಿನಗರ ವೆಂಕಟೇಶ್, ಬಳ್ಳಾರಿ ನಗರ ಸಂಚಾಲಕರಾದ ಗುರುದೇವ, ಬಳ್ಳಾರಿ ತಾಲೂಕು ಸಂಚಾಲಕರಾದ ಹೊನ್ನೇಶ್, ವಿದ್ಯಾರ್ಥಿ ಒಕ್ಕೂಟದ ಜಿಲ್ಲಾ ಸಂಚಾಲಕರಾದ ಅರುಣ್ ಕುಮಾರ್ ಮುಂಡ್ರಿಗಿ, ಮತ್ತಿತರ ಮುಖಂಡರು ಉಪಸ್ಥಿತರಿದ್ದರು.

## ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ-ರವಿಚೆಳ್ಳಗುರ್ಕಿ




ಬಳ್ಳಾರಿ ಮಾ-ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ ಎಂದು ಕರ್ನಾಟಕ ರಾಜ್ಯ ಕ್ರಿಯಾಶೀಲ ಶಿಕ್ಷಕರ ವೇದಿಕೆ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷ ರವಿಚೇಳ್ಳಗುರ್ಕಿ ಹೇಳಿದರು.ತಾಲೂಕಿನ ಶ್ರೀ ಕ್ಷೇತ್ರ ಚೇಳ್ಳಗುರ್ಕಿಯಲ್ಲಿ ಕೃಷಿ ಮಹಾವಿದ್ಯಾಲಯ ಹಗರಿ ವಿದ್ಯಾರ್ಥಿಗಳಿಂದ ಹಮ್ಮಿಕೊಂಡಿದ್ದ ಎನ್ ಎಸ್ ಎಸ್ ಕ್ಯಾಂಪ್‌ನ ಪರಿಸರ ಜಾಗೃತಿ ಜಾಥಾದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು ಶಿಬಿರಾರ್ಥಿಗಳು ಶಿಬಿರದಲ್ಲಿ ಪಾಲ್ಗೊಳ್ಳುವುದು ಮುಖ್ಯವಲ್ಲ, ಶಿಬಿರದಲ್ಲಿ ಕಲಿತ ಸೇವಾ ಮನೋಭಾವನೆಯನ್ನು ಜೀವನದಲ್ಲಿ ಅಳವಡಿಸಿಕೊಳ್ಳುತ್ತೇನೆ ಎಂದು ಸಂಕಲ್ಪ ಮಾಡಬೇಕು. ಆ ನಿಟ್ಟಿನಲ್ಲಿ ನಮ್ಮ ನಡುವಳಿಕೆ ಇರಬೇಕು ಎಂದರು.

ಪ್ರತಿಯೊಬ್ಬ ಶಿಬಿರಾರ್ಥಿಗೂ ಪರಿಸರ ಕಾಳಜಿ ಇರಬೇಕು. ರೈತರ ಹಾಗೂ ಶ್ರಮಿಕ ವರ್ಗದವರ ಬಗ್ಗೆ ಗೌರವ ಭಾವನೆ ಇರಬೇಕು. ದೇಶ ನಮಗೇನು ಕೊಟ್ಟಿದೆ ಅನ್ನುವ ಬದಲು ದೇಶಕ್ಕಾಗಿ ನಾನೇನು ಕೊಟ್ಟಿದ್ದೇನೆ ಎಂಬ ಪ್ರಶ್ನೆ ನಮ್ಮಲ್ಲಿರಬೇಕು ಎಂದು ಹೇಳಿದರು.ಹೊಟ್ಟೆಗೆ ಹಣ್ಣು ಕೃಷಿಗೆ ಮಣ್ಣು, ಕಾಡು ಬೆಳಸಿ ನಾಡು ಉಳಿಸಿ,ಕಾಡಿದ್ದರೆ ನಾಡು, ಗಿಡಮರ ನೆಡದಿದ್ದರೆ ಜಲಕ್ಷಾಮ ಉಂಟಾಗುತ್ತದೆ,ಆಸ್ತಿ ಅಂತಸ್ತಿಗಿಂತ ಆರೋಗ್ಯ ಹಿತಮುಖ್ಯ ಎಂಬ ಘೋಷಣೆ ಕೂಗುತ್ತಾ ಊರಿನ ಬೀದಿಗಳಲ್ಲಿ ಜಾಗೃತಿ ಮೂಡಿಸಿದರು.ಶಿಬಿರದ ಯೋಜನಾಧಿಕಾರಿ ಡಾ.ನಾಗೇಶ ಬಸಪ್ಪ ಜಾನೆಕಲ್ಲು,ಗುಂಪಿನ ನಾಯಕರಾದ ಸರಸ್ವತಿ, ಅನಿಲ್ ಕುಮಾರ್, ರಾಮಚಂದ್ರ, ಶರಣ,ಸಂತೋಷ ಮುಂತಾದವರು ಉಪಸ್ಥಿತರಿದ್ದರು.

## ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ: ಬಳ್ಳಾರಿಯಲ್ಲಿ ಶಂಕಿತ ಬಾಂಬರ್‌ಗಾಗಿ ಹುಡುಕಾಟ ನಡೆಸಿರುವ ಎನ್‌ಐಎ ಅಧಿಕಾರಿಗಳು



ಬಳ್ಳಾರಿ ಮಾ -ಕಳೆದ ವಾರ ಬೆಂಗಳೂರು ರಾಮೇಶ್ವರಂ ಕೆಫೆಯಲ್ಲಿ ನಡೆದ ಬಾಂಬ್ ಸ್ಫೋಟ ಪ್ರಕರಣದ ತನಿಖೆ ತೀವ್ರಗೊಂಡಿದೆ ಯಾದರೂ ಐ ಈಡಿ ಬಾಂಬನ್ನು ಟೈಮರ್ ಮೂಲಕ ಸಿಡಿಸಿದ ಶಂಕಿತನ ಸುಳಿವು ಇದುವರೆಗೂ ತನಿಖಾ ಏಜೆನ್ಸಿಗಳಿಗೆ ಸಿಕ್ಕಿಲ್ಲ. ಎನ್‌ಐಎ ಅಧಿಕಾರಿಗಳು ಅವನ ನ್ನು ಪತ್ತೆ ಮಾಡುವ ಕಾರ್ಯದಲ್ಲಿ ತೊಡಗಿದ್ದು, ತುಮ ಕೂರು ಮತ್ತು ಬಳ್ಳಾರಿಯಲ್ಲಿ ಹುಡುಕಾಟ ನಡೆಸಿದ್ದಾರೆ. ಅವರಿಗೆ ಲಭ್ಯವಾಗಿರುವ ಮಾಹಿತಿ ಪ್ರಕಾರ ಶಂಕಿತನು ಬಾಂಬ್ ಸ್ಫೋಟಿಸಿದ ಬಳಿಕ ಬೆಂಗಳೂರುನಿಂದ ತುಮಕೂರುಗೆ ಹೋಗಿದ್ದಾನೆ ಮತ್ತು ಅಲ್ಲಿಂದ ಬಳ್ಳಾರಿಯ ಕಡೆ ಹೊರಟಿದ್ದಾನೆ.

ರಾಷ್ಟ್ರೀಯ ತನಿಖಾ ದಳದ ಅಧಿಕಾರಿಗಳು ನಿನ್ನೆ ತುಮಕೂರುನಲ್ಲಿ ಹುಡುಕಾಟ ನಡೆಸಿ ಅಲ್ಲಿಂದ ಬಳ್ಳಾರಿಗೆ ತೆರಳಿದ್ದಾರೆ.ದೃಶ್ಯಗಳಲ್ಲಿ ಬಳ್ಳಾರಿ ನಗರದ ಕೇಂದ್ರೀಯ ಬಸ್ ನಿಲ್ದಾಣದಲ್ಲಿ ಹುಡುಕಾಟ ನಡೆಸಿದ್ದಾರೆ. ಎನ್‌ಐಎ ಹತ್ತು ಅಧಿಕಾರಿಗಳು ಎರಡು ಕಾರರುಗಳಲ್ಲಿ ಬಳ್ಳಾರಿಯಲ್ಲಿ ಬೀಡು ಬಿಟ್ಟಿದ್ದಾರೆ. ಏತನ್ಮಧ್ಯೆ ಬಾಂಬ್ ಸ್ಫೋಟಗೊಳಿಸಿದವನ ಫೋಟೋಗಳನ್ನು ಪೊಲೀಸ್ ಇಲಾಖೆ ಬಿಡುಗಡೆ ಮಾಡಿದ್ದು ಸುಳಿವು ನೀಡಿದವರಿಗೆ ರೂ. 10 ಲಕ್ಷ ಬಹುಮಾನ ಘೋಷಿಸಿದೆ.

## ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ತಾತ್ಕಾಲಿಕ ಪಟ್ಟಿ ಪ್ರಕಟ : ಆಕ್ಷೇಪಣೆ ಆಹ್ವಾನ

ವಿಜಯಪುರ, ಮಾ.-: ಜಿಲ್ಲೆಯ ಇಂಡಿ ತಾಲೂಕಿನ ನಿಂಬಾಳ ಕೆ.ಡಿ., ಕಪನಿಂಬರಗಿ, ಹಿಂಗಣಿ ಹಾಗೂ ಪಡನೂರ ಗ್ರಾಮ ಪಂಚಾಯತ್‌ಗಳಲ್ಲಿ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸಲು ಆಯ್ಕೆಯಾದ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಪ್ರಕಟಿತ ಪಟ್ಟಿಗೆ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

ಆಯ್ಕೆಯಾದ ತಾತ್ಕಾಲಿಕ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಕಚೇರಿ ನೋಟಿಸ್ ಬೋರ್ಡಿಗೆ ಹಾಗೂ ತಾಲೂಕಾ ಪಂಚಾಯತ್ ಇಂಡಿ, ಕಚೇರಿ ಮತ್ತು ನಿಂಬಾಳ ಕೆ.ಡಿ., ಕಪನಿಂಬರಗಿ, ಹಿಂಗಣಿ ಹಾಗೂ ಪಡನೂರ ಗ್ರಾಮ ಪಂಚಾಯತ್ ಕಾರ್ಯಾಲಯದ ನೋಟಿಸ್ ಬೋರ್ಡನಲ್ಲಿ ಪ್ರಕಟಿಸಲಾಗಿದ್ದು, ಅಭ್ಯರ್ಥಿಗಳ ಆಯ್ಕೆಗೆ ಆಕ್ಷೇಪಣೆ ಸಲ್ಲಿಸುವವರು ದಿನಾಂಕ : 18-03-2024ರೊಳಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವಿಜಯಪುರ ಕಚೇರಿಗೆ ಸಲ್ಲಿಸಬೇಕು. ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಮಾತ್ರ ಆಕ್ಷೆಪಣೆಗಳನ್ನು ಸಲ್ಲಿಸಬಹುದಾಗಿದ್ದು, ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕನಕದಾಸ ಬಡಾವಣೆ, ಜಿಲ್ಲಾ ಪಂಚಾಯತ್ ಆವರಣ, ವಿಜಯಪುರ ದೂ: 08352-796060 ಸಂಖ್ಯೆಗೆ ಸಂಪರ್ಕಿಸುವಂತೆ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೃದ್ಧಾಶ್ರಮದಲ್ಲಿ ಹುಟ್ಟು ಹಬ್ಬ ಆಚರಿಸಿಕೊಂಡ ಎಂ.ಜಿ.ಕನಕ



ಬಳ್ಳಾರಿ ಮಾ-ಧ್ರುವ ಸರ್ಜಾ ಅವರ ಅಭಿಮಾನಿ, ಸಚಿವ ಬಿ.ನಾಗೇಂದ್ರ ಅವರ ಶಿಷ್ಯ, ಕೆಪಿಸಿಸಿ ಸಾಮಾಜಿಕ ಜಾಲತಾಣ ಘಟಕದ ಬಳ್ಳಾರಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಗೂ ಸಮಾಜ ಸೇವಕರಾದ ಎಂ.ಜಿ ಕನಕ ಅವರು ತಮ್ಮ ಹುಟ್ಟು ಹಬ್ಬವನ್ನು ಸಂಗನಕಲ್ ಗ್ರಾಮದಲ್ಲಿರುವ ಆದರ್ಶ ವೃದ್ಧಾಶ್ರಮದಲ್ಲಿ ವೃದ್ಧರಿಗೆ ಹಣ್ಣು ಹಂಪಲು ಮತ್ತು ಅನ್ನದಾನ ಮಾಡುವ ಮೂಲಕ ಆಚರಣೆ ಮಾಡಿಕೊಂಡರು.ನಂತರ ನಗರದ ಅಧಿದೇವತೆ ಬಳ್ಳಾರಿ ಕನಕ ದುರ್ಗಮ್ಮ ದೇವಿಗೆ ವಿಶೇಷ ಪೂಜೆ ಸಲ್ಲಿಸಿ ಕೇಕ್ ಕಟ್ ಮಾಡಲಾಯಿತು. ನಂತರ ಅವರ ಸ್ನೇಹಿತರು ಎಂ.ಜಿ ಕನಕ ಅವರ ಕುರಿತು ಮಾಡಲಾದ ಹಾಡನ್ನು ನಗರ ಪಾಲಿಕೆ ಸದಸ್ಯ ಪಿ. ಗಾದೆಪ್ಪ ಅವರು ಬಿಡುಗಡೆಗೊಳಿಸಿದರು.ಎಂ.ಜಿ ಕನಕ ಅವರ ಕೆಲವು ಸಾಮಾಜಿಕ ಕೆಲಸಗಳನ್ನು ಗುರುತಿಸಿದ ಅವರ ಸ್ನೇಹಿತರು ನಗರದ ಹಲವು ಕಡೆ ಕೇಕ್ ಕಟ್ ಮಾಡಿ ಸಂಭ್ರಮಿಸಿದರು. ನಂತರ ಮಾತನಾಡಿದ ಪಾಲಿಕೆ ಸದಸ್ಯ ಪಿ. ಗಾದೆಪ್ಪ ಅವರು, ಎಂ.ಜಿ.ಕನಕ ಅವರು ಹಲವಾರು ರೀತಿಯಲ್ಲಿ ಸಾಮಾಜಿಕ ಸೇವೆಗಳನ್ನು ಮಾಡುತ್ತಿದ್ದಾರೆ. ಇವರು ತಮಗೆ ನೀಡಿದ ಕೆಲಸಗಳನ್ನು ಅಚ್ಚುಕಟ್ಟಾಗಿ ನಿಭಾಯಿಸಿಕೊಂಡು ಹೋಗುತ್ತಾರೆ. ಆದ್ದರಿಂದ ಇವರಿಗೆ ಜನರು ಹೆಚ್ಚು ಪ್ರೀತಿಸುತ್ತಾರೆ ಎಂದ ಅವರು, ನಿಮ್ಮ ಈ ಸಾಮಾಜಿಕ ಕಳಕಳಿ ಹಾಗೂ ಸಮಾಜ ಸೇವೆ ಹೀಗೆ ಮುಂದವರೆಯಲಿ. ನಿಮಗೆ ಬೇಕಾದ ಪ್ರೋತ್ಸಾಹವನ್ನು ನಾವು ನಿಮಗೆ ನೀಡುತ್ತೇವೆ ಎಂದರು.ಇದೇ ವೇಳೆ ಎಂ. ಜಿ ಕನಕ ಅವರು ಮಾತನಾಡಿ, ನನ್ನ ಹುಟ್ಟು ಹಬ್ಬ ಆಚರಣೆಗೆ ಬಂದ ನನ್ನ ಎಲ್ಲಾ ಸ್ನೇಹಿತರುಗೂ ನನ್ನ ಕೃತಜ್ಞತೆಯನ್ನು ತಿಳಿಸುತ್ತೇನೆ.ಇಂದಿನ ದಿನಗಳಲ್ಲಿ ಬಡವರಿಗೆ ನಾನು ನನ್ನ ಕೈಲಾದ ಸಹಾಯ ಮಾಡುತ್ತಿದ್ದೆನೆ ಇದಕ್ಕೆ ಕಾರಣ ಶ್ರೀ ಕನಕ ದುರ್ಗಮ್ಮನ ಆಶೀರ್ವಾದ ಮತ್ತು ನಮ್ಮ ಸ್ನೇಹಿತರ ಪ್ರೋತ್ಸಾಹ ಕಾರಣವಾಗಿದೆ. ಮುಂದಿನ ದಿಗಳಲ್ಲಿಯೂ ನನ್ನ ಕೈಯಲ್ಲಾದ ಸಹಾಯವನ್ನು ಜನರಿಗೆ ಮಾಡುತ್ತೆನೆ ಎಂ.ಜಿ ಕನಕ ಹೇಳಿದರು. ಈ ಸಂದರ್ಭದಲ್ಲಿ ಉಮಾರ್ ಫಾರೂಕ್, ವೈ.ಅರುಣ್ ಕುಮಾರ್, ಸಿ.ತಿಪ್ಪೇರುದ್ರ, ನಾಗರಾಜ್ ಹುಬ್ಬಳ್ಳಿ, ಯೋಗೇಶ್ ಕುಮಾರ್ ಬಂಡಾರಿ, ಮೋಕ ಪಾಷಾ, ಡಿ.ಕೆ ಗಾದಿ, ಗಂಗಾಧರ ಸೇರಿದಂತೆ ಎಂ.ಜಿ ಕನಕ ಅವರು ಸ್ನೇಹಿತ ಬಳಗದವರು ಹಾಜರಿದ್ದರು.

## ಮೋದಿ ಗೆಲುವಿಗಾಗಿ 102 ವರ್ಷದ ಅಜ್ಜಿಯಿಂದ ಪಾದಯಾತ್ರೆ



ಬಳ್ಳಾರಿ ಮಾ - ದೇಶದಲ್ಲಿ ಮತ್ತೊಮ್ಮೆ ಮೋದಿ ಅಧಿಕಾರಕ್ಕೆ ಬರುತ್ತಾನೆ ಎಂದು ಸಮೀಕ್ಷೆಗಳು ಹೇಳುತ್ತಿದ್ದು, ನಮೋ ಬೆಂಬಲಿಗರಲ್ಲಿ ಉತ್ಸಾಹ ಗರಿಗೆದರಿದೆ. ಅತ್ತ ತುಮಕೂರು ಜಿಲ್ಲೆಯ ತಿಪಟೂರಿನಲ್ಲಿ ಮೋದಿಗೊಬ್ಬರು ಶತಾಯುಷಿ ಅಭಿಮಾನಿಯಿದ್ದಾರೆ. ಅವರು ಪ್ರಧಾನಿ ಆಗಲಿ ಎಂದು 102 ವರ್ಷದ ಪಾರ್ವತಮ್ಮ ಮಲೆ ಮಹದೇಶ್ವರ ಬೆಟ್ಟಕ್ಕೆ ಪಾದಯಾತ್ರೆ ಮಾಡಿದ್ದಾರೆ. 18 ಕಿಮೀ ದೂರವನ್ನು ಕಾಲ್ನಡಿಗೆ ಮೂಲಕ ಅಜ್ಜಿ ಕ್ರಮಿಸಿದ್ದಾರೆ. ದೇಶಕ್ಕೆ ಒಳ್ಳೆಯದಾಗಬೇಕೆಂಬುದೇ ನನ್ನ ಗುರಿ ಎಂದು ಪಾರ್ವತಮ್ಮ ಹೇಳಿದ್ದಾರೆ.

## ಸ್ಥಾಯಿ ಸಮಿತಿ ಸದಸ್ಯರ ಚುನಾವಣೆ ಮುಂದೂಡಿಕೆ

ವಿಜಯಪುರ, ಮಾ-: ವಿಜಯಪುರ ಮಹಾನಗರ ಪಾಲಿಕೆಯ 21ನೇ ಅವಧಿಗೆ ವಿವಿಧ ನಾಲ್ಕು ಸ್ಥಾಯಿ ಸಮಿತಿಗಳ ಸದಸ್ಯರ ಆಯ್ಕೆಗೆ ಮಾ.12 ರಂದು ನಿಗದಿಪಡಿಸಿದ ಚುನಾವಣೆಯನ್ನು ಕಾರಣಾಂತರಗಳಿಂದ ಮುಂದೂಡಲಾಗಿದೆ ಎಂದು ವಿಜಯಪುರ ಮಹಾನಗರ ಪಾಲಿಕೆ ಅಧ್ಯಕ್ಷಾಧಿಕಾರಿಗಳಾದ ಬೆಳಗಾವಿ ವಿಭಾಗದ ಪ್ರಾದೇಶಿಕಆಯುಕ್ತರುತಿಳಿಸಿದ್ದಾರೆ.

## ದ್ವಿತೀಯ ಪಿಯು ಇತಿಹಾಸ-ಭೌತಶಾಸ್ತ್ರ ಪರೀಕ್ಷೆ : 1163 ವಿದ್ಯಾರ್ಥಿಗಳು ಗೈರು

ವಿಜಯಪುರ, ಮಾ.-: ಜಿಲ್ಲೆಯಲ್ಲಿ ಗುರುವಾರ ನಡೆದ ದ್ವಿತೀಯ ಪಿಯುಸಿ ಇತಿಹಾಸ ಹಾಗೂ ಭೌತಶಾಸ್ತ್ರ ಪರೀಕ್ಷೆಯಲ್ಲಿ 1163 ವಿದ್ಯಾರ್ಥಿಗಳ ಗೈರ ಹಾಜರಾಗಿದ್ದರು ಎಂದು ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ. ಇತಿಹಾಸ ಪರೀಕ್ಷೆಗೆ ಒಟ್ಟು 17409 ವಿದ್ಯಾರ್ಥಿಗಳು ನೊಂದಾಯಿಸಿಕೊಂಡಿದ್ದು, 16423 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 986 ವಿದ್ಯಾರ್ಥಿಗಳು ಗೈರ ಹಾಜರಾಗಿದ್ದರು.ಅದರಂತೆ ಭೌತಶಾಸ್ತ್ರ ಪರೀಕ್ಷೆಗೆ 11504 ವಿದ್ಯಾರ್ಥಿಗಳು ನೊಂದಾಯಿಸಿಕೊಂಡಿದ್ದು, 11327 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 177 ವಿದ್ಯಾರ್ಥಿಗಳು ಗೈರ ಹಾಜರಾಗಿದ್ದರು. ಒಟ್ಟಾರೆ 1163 ವಿದ್ಯಾರ್ಥಿಗಳು ಪರೀಕ್ಷೆಗೆ ಗೈರ ಹಾಜರಾಗಿದ್ದರು ಎಂದು ಅವರು ತಿಳಿಸಿದ್ದಾರೆ.